# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 631 |
| ಸದಸ್ಯರ ಹೆಸರು | : | ಶ್ರೀ ಎಸ್. ರವಿ |
| ಉತ್ತರಿಸುವ ದಿನಾಂಕ | : | 23-12-2022 |
| ಉತ್ತರಿಸುವ ಸಚಿವರು | : | ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ರಾಜ್ಯದಲ್ಲಿರುವ ಮೂಲ ಆದಿವಾಸಿಗಳ ಅಭಿವೃದ್ಧಿಗಾಗಿ (ಜೇನು ಕುರುಬ, ಕೊರಗ ಮತ್ತು ಇತರೆ ಅರಣ್ಯ ಆಧಾರಿತ ಬುಡಕಟ್ಟು ಸಮುದಾಯ) ಮತ್ತು ಈ ಸಮುದಾಯಗಳ ಕಲೆ, ಸಂಸ್ಕೃತಿ, ಭಾಷೆ ಮತ್ತು ಇತರೆ ವಿಷಯಗಳ ವಿಶೇಷ ಅಧ್ಯಯನಕ್ಕಾಗಿ ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ, ಮೈಸೂರು ಇದರ ಅಡಿಯಲ್ಲಿ 2016ರಲ್ಲಿ ಸ್ಥಾಪನೆಯಾದ ಮೂಲ ಆದಿವಾಸಿ ಅಧ್ಯಯನ ಕೇಂದ್ರ ಪ್ರಾರಂಭವಾದ ಒಂದೆರಡು ವರ್ಷಗಳಲ್ಲೇ ಮುಚ್ಚಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿಲ್ಲ |
| ಆ) | ಬಂದಿದ್ದಲ್ಲಿ, ಈ ಮೂಲ ಆದಿವಾಸಿ ಅಧ್ಯಯನ ಕೇಂದ್ರವನ್ನು ಮುಚ್ಚಲು ಕಾರಣಗಳೇನು; (ಸಂಪೂರ್ಣ ವಿವರ ನೀಡುವುದು) | ಉದ್ಭವಿಸುವುದಿಲ್ಲ |
| ಇ) | ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ, ಮೈಸೂರು ಇದರ ಅಡಿಯಲ್ಲಿ 2016 ರಲ್ಲಿ ಸ್ಥಾಪನೆಯಾದ ಮೂಲ ಆದಿವಾಸಿ ಅಧ್ಯಯನ ಕೇಂದ್ರವನ್ನು ಪುನ: ಪ್ರಾರಂಭಿಸುವ ಇಚ್ಛೆ ಸರ್ಕಾರಕ್ಕಿದೆಯೇ; ಹಾಗಿದ್ದಲ್ಲಿ, ಈ ಕೇಂದ್ರವನ್ನು ಪ್ರಾರಂಭಿಸಲು ಯಾವ ಕಾಲಮಿತಿಯೊಳಗೆ ಕ್ರಮ ಕೈಗೊಳ್ಳುವುದು; ಈ ಕೇಂದ್ರಕ್ಕೆ ಮೂಲ ಆದಿವಾಸಿ ಜನಾಂಗಕ್ಕೆ ಸೇರಿದ ಪ್ರತಿಭಾವಂತರನ್ನು ಸಂಶೋಧನಾಧಿಕಾರಿಯನ್ನಾಗಿ ನೇಮಿಸಲು ಮುಖ್ಯಮಂತ್ರಿಗಳು ಶಿಫಾರಸ್ಸು ಮಾಡಿದ್ದು, ನೇಮಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರವು ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು) | ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ, ಮೈಸೂರು ಈ ಹಿಂದೆ ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಅದನ್ನು ಹೊಸ ಸ್ವಂತ ಕಟ್ಟಡಕ್ಕೆ ಸ್ಥಳಾಂತರಿಸಲಾಗಿದ್ದು, ಸದರಿ ಕಟ್ಟಡದಲ್ಲಿ ಕೋಣೆಗಳನ್ನು ನಿಗಧಿಪಡಿಸುವ ಕಾರ್ಯವು ಚಾಲನೆಯಲ್ಲಿರುತ್ತದೆ. ಸಂಶೋಧನಾಧಿಕಾರಿ ಹುದ್ದೆಗೆ ಯಾವುದಾದರೂ ವಿಶ್ವವಿದ್ಯಾಲಯದ ಮಾನವಶಾಸ್ತ್ರದ ಪ್ರಾಧ್ಯಾಪಕರನ್ನು ನಿಯೋಜಿಸಬಹುದಾಗಿರುತ್ತದೆ. ಕ್ಷೇತ್ರ ಸಂಶೋಧಕರ ಹುದ್ದೆಯು ಹೊರಗುತ್ತಿಗೆ ಆಧಾರದ ಮೇಲೆ ತೆಗದುಕೊಳ್ಳಲು ಅವಕಾಶವಿರುವ ಹಿನ್ನೆಲೆಯಲ್ಲಿ ಮಾನ್ಯ ಮುಖ್ಯಮಂತ್ರಿಗಳ ಶಿಫಾರಸ್ಸಿನಂತೆ ಮೂಲ ಆದಿವಾಸಿ ಸಮುದಾಯದ ಒಬ್ಬರು ಪ್ರತಿಭಾವಂತರನ್ನು ಹೊರಗುತ್ತಿಗೆ ಮೇರೆಗೆ ನೇಮಕ ಮಾಡಿಕೊಳ್ಳಲಾಗಿದೆ. |

ಸಕಇ 509 ಎಸ್‌ಟಿಪಿ 2022

(ಬಿ. ಶ್ರೀರಾಮುಲು)
ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ
ಕಲ್ಯಾಣ ಸಚಿವರು